ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 20–11–2019

## ಪತ್ರಿಕಾ ಪ್ರಕಟಣೆ

## ರಾಜ್ಯಾದಾದ್ಯಂತ 243 ಕೇಂದ್ರಗಳಲ್ಲಿ ಡ್ರಾಯಿಂಗ್ ಗ್ರೇಡ್ ಪರೀಕ್ಷೆ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ 2019ನೇ ಸಾಲಿನಲ್ಲಿ ನಡೆಯುವ ಡ್ರಾಯಿಂಗ್ ಲೋಯರ್ ಮತ್ತು ಹೈಯರ್ ಗ್ರೇಡ್ ಪರೀಕ್ಷೆಗಳು ರಾಜ್ಯಾದಾದ್ಯಂತ 243 ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರಗಳಲ್ಲಿ ದಿನಾಂಕ: 20.11.2019, 21.11.2019 ಮತ್ತು 22.11.2019 ರವರೆಗೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ)

ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ವಿವಿಧ ಜಾನಪದ ಕಲಾ ಪ್ರಕಾರಗಳು ಜಾನಪದ ಗಾಯನದ ಬಗ್ಗೆ ತರಬೇತಿ ಪಡೆಯುವಂತಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಸಾಮಾನ್ಯ ವರ್ಗದ ಶಿಬಿರಾರ್ಥಿಗಳಿಗಾಗಿ ಅರ್ಜಿ ಆಹ್ವಾನಿಸಿದೆ.

ಶಿಬಿರಾರ್ಥಿಗಳಿಗೆ ಜಾನಪದ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಮೂಲ ಗುರುಗಳಿಂದ ತರಬೇತಿ ನೀಡಲಾಗುವುದು. 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳಿಗೆ ಮಾತ್ರ ಅವಕಾಶ ಇರುತ್ತದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಅರ್ಜಿಗಳನ್ನು ಕರ್ನಾಟಕ ಜಾನಪದ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು ಹಾಗೂ ಸಹಾಯಕ ನಿರ್ದೇಶಕರುಗಳ ಕಾರ್ಯಾಲಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳಿಂದ

ಪಡೆಯಬಹುದಾಗಿದೆ. ಅರ್ಜಿಗಳನ್ನು ದಿನಾಂಕ: 10-12-2019 ರಂದು ಸಂಜೆ 5.00 ಗಂಟೆಯೊಳಗೆ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಜಾನಪದ ಅಕಾಡೆಮಿಯ ದೂರವಾಣಿ ಸಂಖ್ಯೆ 080-22215509 ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಅಕಾಡೆಮಿ ಪ್ರಕಟಣೆ ತಿಳಿಸಿದೆ.

## ಮೀಸಲಾತಿ ಸಂಬಂಧವಾಗಿ ಚರ್ಚಿಸಲು ಸಮಾಲೋಚನಾ ಸಭೆ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ)

ಪರಿಶಿಷ್ಟ ಜಾತಿ/ಪರಿಶಿಷ್ಟ ಜನಸಂಖ್ಯೆಗೆ ಅನುಗುಣವಾಗಿ ಈಗಿರುವ ಮೀಸಲಾತಿಯನ್ನು ಹೆಚ್ಚಿಸುವ ಕುರಿತು ವರದಿ ನೀಡಲು ಶ್ರೀ ಎಚ್.ಎನ್. ನಾಗಮೋಹನ ದಾಸ್, ನಿವೃತ್ತ ನ್ಯಾಯಮೂರ್ತಿ, ಕರ್ನಾಟಕ ಉಚ್ಛ ನ್ಯಾಯಾಲಯ ರವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಿ ಆದೇಶಿಸಿಸಲಾಗಿದೆ.

ನ್ಯಾಯಮೂರ್ತಿಗಳು ವಿವಿಧ ರಾಜಕೀಯ ಪಕ್ಷಗಳ ಪ್ರಮುಖರು/ಮುಖಂಡರುಗಳೊಂದಿಗೆ ಮೀಸಲಾತಿ ಸಂಬಂಧವಾಗಿ ಚರ್ಚಿಸಲು ಸಮಾಲೋಚನಾ ಸಭೆಯನ್ನು ನವೆಂಬರ್ 22 ರಂದು ಬೆಳಿಗ್ಗೆ 11.00 ಗಂಟೆಗೆ ಸಭಾ ಕೊಠಡಿ, 2ನೇ ಮಹಡಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಟ್ಟಡ, ಯವನಿಕಾ, ನೃಪತುಂಗ ರಸ್ತೆ, ಬೆಂಗಳೂರು – 1 ಇಲ್ಲಿ ಕರೆಯಲಾಗಿದೆ.

## ಮೂಲ ದಾಖಲಾತಿ ಪರಿಶೀಲನೆ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ)

2018-19ನೇ ಸಾಲಿನಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ (ಹೈದರಾಬಾದ್-ಕರ್ನಾಟಕ ರಾಜ್ಯ ಮಟ್ಟದ ವೃಂದ ಮತ್ತು ಇತರೆ ಮೂಲ ವೃಂದ) ಈ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳ 1:2 ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ನಿಮ್ಮ ಮೂಲ ದಾಖಲಾತಿಗಳನ್ನು ದಿನಾಂಕ: 26-11-2019 ಮತ್ತು 27-11-2019 ರಂದು ಉಪ ನಿರ್ದೇಶಕ ಕಚೇರಿ, ಬೆಂಗಳೂರು ದಕ್ಷಿಣ ಜಿಲ್ಲೆ ಕಲಾಸಿಪಾಳ್ಯ, ಬೆಂಗೂರು ಇಲ್ಲಿ ಬೆಳಿಗ್ಗೆ 10.30 ರಿಂದ 5.30 ಗಂಟೆವರೆಗೆ ಹಾಜರಾಗಿ ಮೂಲದಾಖಲೆಯನ್ನು ಪರಿಶೀಲನೆಗೆ ಒದಗಿಸಿ ಪರಿಶೀಲಿಸಿಕೊಳ್ಳುವಂತೆ ಸಂಬಂಧಿಸಿದ ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

# ನವೆಂಬರ್ 25 ರಿಂದ ಡಿಸೆಂಬರ್ 10 ರವರೆಗೆ ಕ್ಷಯರೋಗ ಪತ್ತೆ ಆಂದೋಲನ

ಬೆಂ.ನ.ಜಿಲ್ಲೆ, ನವೆಂಬರ್ 20 (ಕರ್ನಾಟಕ ವಾರ್ತೆ) : ಬೆಂಗಳೂರು ನಗರ ಜಿಲ್ಲೆಯಾದ್ಯಂತ ನವೆಂಬರ್ 25 ರಿಂದ ಡಿಸೆಂಬರ್ 10 ರವರೆಗೆ ಕ್ಷಯರೋಗ ಪತ್ತೆ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶ್ರೀರೂಪ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ, ಸಕ್ರಿಯ ಪ್ರಕರಣ ಪತ್ತೆ ಆಂದೋಲನದ ಮೈಕ್ರೋ ಪ್ಲಾನ್ ಪೂರ್ವ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸ್ಲಂ, ಕೈದಿಗಳು, ವೃದ್ಧಾಶ್ರಮಗಳು, ಕಟ್ಟಡ ನಿರ್ಮಾಣ, ಕಾರ್ಮಿಕರು, ನಿರಾಶ್ರಿತರು, ರಾತ್ರಿ ಆಶ್ರಯಗಳು, ಹೆಚ್ಐವಿ ಕೇಂದ್ರಗಳು, ವಸತಿ ಇಲ್ಲದವರು, ಬೀದಿ ಮಕ್ಕಳು, ಅನಾಥ ಆಶ್ರಮಗಳು, ಮಿಲ್ ಕೆಲಸಗಾರರು, ನೇಕಾರಿಕ ಕಾರ್ಮಿಕರ, ಕಲ್ಲು ಕೊರಯುವವರು ಹಾಗೂ ಅಸಂಘಟಿತ ಕಾರ್ಮಿಕರನ್ನು ಒಳಗೊಂಡ ಹೆಚ್ಚಿನ ಸಾಂದ್ರತೆಯಿರುವ ಕಡೆ ಪ್ರಚಾರ, ಪತ್ತೆ ಕಾರ್ಯಕ್ರಮ, ಟಿ.ಬಿ ಸೇವೆಗಳನ್ನು ಮನೆ ಬಾಗಿಲಿಗೆ ತಲುಪುವಂತೆ ಮಾಡುವ ಉದ್ದೇಶದಿಂದ ಆಂದೋಲನವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 3,796 ರೋಗಿಗಳು ಪತ್ತೆಯಾಗಿದ್ದು, ಕ್ಷಯ ರೋಗಕ್ಕೆ ತುತ್ತಾಗುವ ಒಬ್ಬ ಕ್ಷಯರೋಗಿಯು 10-15 ಜನರಿಗೆ ಹರಡುವ ಸಾಧ್ಯತೆಯಿರುವುದರಿಂದ ಸಾರ್ವಜನಿಕರಿಗೆ ಈ ರೋಗದ ಬಗ್ಗೆ ಅರಿವು ಮೂಡಿಸಿ ಚಿಕಿತ್ಸೆ ಪಡೆಯಲು ಪ್ರೋತ್ಸಾಹಿಸಬೇಕು ಎಂದು ಆರೋಗ್ಯ ಇಲಾಖೆಗೆ ಸೂಚಿಸಿದರು.

2 ವಾರಕ್ಕಿಂತ ಹೆಚ್ಚು ಕೆಮ್ಮು, 2ವಾರಕ್ಕಿಂತ ಹೆಚ್ಚು ಜ್ವರ, ಗಣನೀಯವಾಗಿ ತೂಕದ ನಷ್ಟ, ಕಳೆದ 6 ತಿಂಗಳಲ್ಲಿ ಯಾವುದೇ ಸಮಯದಲ್ಲಿ ಕಫದಲ್ಲಿ ರಕ್ತ ಬೀಳುವುದು, ಕಳೆದ 1 ತಿಂಗಳಿನಿಂದ ಎದೆ ನೋವು ಇದ್ದರೆ ಚಿಕಿತ್ಸೆ ಪಡೆಯಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಗಳಾದ ಡಾ.ಜಿ.ಎ.ಶ್ರೀನಿವಾಸ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳಾದ ಡಾ.ಕುಮಾರ್.ಎಂ.ವಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಕ್ರಿಯ ಪ್ರಕರಣ ಪತ್ತೆ ಆಂದೋಲನದ ಮೈಕ್ರೋ ಪ್ಲಾನ್ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶ್ರೀಮತಿ ಶ್ರೀರೂಪ ಅಧ್ಯಕ್ಷತೆ ವಹಿಸಿರುವುದು.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 20 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 2018-19ನೇ ಸಾಲಿನಲ್ಲಿ ಕನ್ನಡದಲ್ಲಿ ಎಂ.ಫಿಲ್ ಮತ್ತು ಪಿಹೆಚ್‌ಡಿ ಪದವಿ ಪಡೆದ ಮಹಾಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಸಹಾಯಧನ ಹಾಗೂ ಸಾಮಾನ್ಯ ಅಭ್ಯರ್ಥಿಗಳಿಗಾಗಿ ಸೃಜನೇತರ ಕನ್ನಡ ಗ್ರಂಥಗಳಿಗೆ ಸಹಾಯಧನ ಯೋಜನೆಗಾಗಿ ಅರ್ಜಿ ಆಹ್ವಾನಿಸಿದೆ.

ಕನ್ನಡದಲ್ಲಿ ಎಂ.ಫಿಲ್ ಮತ್ತು ಪಿಎಚ್.ಡಿ ಪದವಿ ಪಡೆದ ಮಹಾಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಸಹಾಯಧನ ಯೋಜನೆಗಾಗಿ ಇಲಾಖೆಯ ಜಾಲತಾಣ www.kannadasiri.in ನಿಂದ ಆನ್‌ಲೈನ್ ಮೂಲಕ ಹಾಗೂ ಸಾಮಾನ್ಯ ವರ್ಗದ ಅಭ್ಯರ್ಥಿಗಳು 2018-19 ನೇ ಸಾಲಿನಲ್ಲಿ ಪ್ರಕಟಿತ ಸೃಜನೇತರ ಕನ್ನಡ

ಗ್ರಂಥಗಳಿಗೆ ಧನಸಹಾಯಕ್ಕಾಗಿ ಇಲಾಖೆಯ ಜಾಲತಾಣ **www.kannadasiri.in** ನಿಂದ ಅರ್ಜಿ ನಮೂನೆ ಪಡೆದು ನೇರವಾಗಿ ಇಲಾಖೆಗೆ ಸಲ್ಲಿಸಬಹುದಾಗಿದೆ.

ಡಿಸೆಂಬರ್ 14 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.